ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ಬನಹಟ್ಟಿ

ಸಿ.ಸಿ.ನಂ.**832/2022**

ಅಸಾಃ 4(ಚಾಸಾ-7)

| | |
|---|---|
| ಹೆಸರು | ಸಿದ್ದಪ್ಪ ಹಿರೇಕುರಬರ |
| ತಂದೆಯ /ಗಂಡನ ಹೆಸರು | ಬಲವಂತಪ್ಪ |
| ವಯಸ್ಸು | 62 ವರ್ಷ |
| ಉದ್ಯೋಗ | ನಿವೃತ್ತ ಪಿ ಎಸ್ ಐ |
| ವಾಸಸ್ಥಳ | ಮುದ್ದೇಬಿಹಾಳ |

ದಿನಾಂಕ 01-02-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರವರಿಂದ

ನಾನು 2017 ರಿಂದ 2023 ವರೆಗೆ ನಾನು ಎ ಎಸ್ ಐ ಅಂತಾ ಮಹಾಲಿಂಗಪೂರ ಪೋ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿದ್ದೇನೆ .

ದಿನಾಂಕ 14-04-2018 ರಂದು ನಾನು ಠಾಣೆಯಲ್ಲಿ ಇದ್ದಾಗ ಚಾಸಾ-1 ರವರು ಸಾರಾಯಿ ರೇಡ ಮಾಡಿಕೊಂಡು ಪಂಚನಾಮೆ , ಮೂ ಮಾ ಗಳು ಮತ್ತು ಆರೋಪಿ ಸಹಿತ ಠಾಣೆಗೆ ಬಂದು ಲಿಖಿತ ಫಿರ್ಯಾದಿಯನ್ನು ಮದ್ಯಾಹ್ನ 01-45 ಗಂಟೆಗೆ ಸಲ್ಲಿಸಿರುತ್ತಾರೆ. ಅದರಂತೆ ನಾನು ನಮ್ಮ ಠಾಣಾ ಗುನ್ನೆ ನಂಬರ 72/2018 ರಂತೆ ಪ್ರಕರಣವನ್ನು ದಾಖಲ ಮಾಡಿಕೊಂಡು ಪ್ರ ವ ವ ವನ್ನು ತಯಾರಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿರುತ್ತೇನೆ. ನಂತರ ಅರೋಪಿಯನ್ನು ದಸ್ತಗೀರ ನಿಯಮ ಪಾಲಿಸಿ ಮಾನ್ಯ ನ್ಯಾಯಾಲಯಕ್ಕೆ ಸೂಕ್ತ ಬೆಂಗಾವಲಿನೊಂದಿಗೆ ಹಾಜರು ಪಡಿಸಿರುತ್ತೇನೆ. ಅದೇ ದಿನ ಚಾಸಾ- 4 ಮತ್ತು 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ದಿನಾಂಕ 19-05-2018 ರಂದು ಜಪ್ತಾದ ಮೂ ಮಾ ಗಳನ್ನು ಪರೀಕ್ಷೆಗಾಗಿ ಎಫ್ ಎಸ್ ಎಲ್ ಬೆಳಗಾವಿಗೆ ಚಾಸಾ- 5 ರವರ ಮೂಲಕ ಕಳುಹಿಸಿರುತ್ತೇನೆ . ಅವರಿಂದ ಸ್ವೀಕೃತ ಪ್ರತಿಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿನಾಂಕ 02-08-2018 ರಂದು ಎಫ್ ಎಸ್ ಎಲ್ ಬೆಳಗಾವಿ ಇವರಿಂದ ಬಂದ ವರದಿಯನ್ನು ಪಡೆದುಕೊಂಡಿರುತ್ತೇನೆ. ದಿನಾಂಕ 22-08-2018 ರಂದು ಆರೋಪಿಯ ಮೇಲೆ ಸಾಕ್ಷಿ ಪುರಾವೆಗಳು ಕಂಡು ಬಂದಿದ್ದರಿಂದ ಆತನ ಮೇಲೆ ಅಂತಿಮ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ನಾನು ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ .

ಈ ಹಂತದಲ್ಲಿ ಸಾಕ್ಷಿ ಫಿರ್ಯಾದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ,ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-2 ಎ ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ ವ ವ ವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು, ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-3 ಎ ಎಂದು ಗುರುತಿಸಲಾಯಿತು .ಎಫ್ ಎಸ್ ಎಲ್ ಕಚೇರಿಯಿಂದ ಬಂದ ಸ್ವೀಕೃತ ಪತ್ರ ಮತ್ತು ವರದಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-4 ಎಂದು ಗುರುತಿಸಲಾಯಿತು. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಮೂ ಮಾ 1 ನ್ನು ನೋಡಿ ಗುರುತಿಸಿರುತ್ತಾರೆ.

ಪಾಟೀ ಸವಾಲುಃ ಆರೋಪಿಯ ಪರ ಶ್ರೀ ಬಿ ಎಚ್ ಕೆ / ಆರ್ ಎಸ್ ಬಿ ವಕೀಲರಿಂದ-

ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದಂತೆ ತನಿಖೆಯನ್ನು ಮಾಡಿ ವರದಿಗಳನ್ನು ಪಡೆದುಕೊಂಡು ಅಂತಿಮ ವರದಿಯನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ

ಸರಿಯಲ್ಲ.

**ಮರು ವಿಚಾರಣೆಃ- ಇಲ್ಲಾ .**

(ತೆರೆದ ನ್ಯಾಯಾಲಯದಲ್ಲಿ ನನ್ನ ನಿರ್ದೇಶನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇ. ಕೇ. ಸರಿ ಅದೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ. ದಂ., ಬನಹಟ್ಟಿ.